ಪಿಡಬ್ಲ್ಯೂ -1

ಇಂದು ದಿ. 10-08-2023 ರಂದು ಸಾಕ್ಷಿಗೆ ಪ್ರಮಾಣವಚನ ಬೋಧೀಸಲಾಯಿತು.

ಮುಖ್ಯ ವಿಚಾರಣೆಃ ಅರ್ಜಿದಾರರ ಪರ ವಕೀಲರಿಂದ.

ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣಪತ್ರ ರೂಪದಲ್ಲಿ ಸಲ್ಲಿಸಿದ್ದು, ಅದರಲ್ಲಿನ ಎಲ್ಲಾ ಅಂಶಗಳನ್ನು ಓದಿ ತಿಳಿದುಕೊಂಡು ಅದಕ್ಕೆ ಸಹಿ ಮಾಡಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲಾ ವಿಷಯಗಳು ಸತ್ಯವಾಗಿರುತ್ತವೆ.

ನಾನು ನ್ಯಾಯಾಲಯಕ್ಕೆ ನನಗೆ ಸಂಬಂಧಿಸಿದ ಮೀನಿಗರಹಳ್ಳಿ ಗ್ರಾಮದ ಸರ್ವೆ ನಂ.59/1 ಮತ್ತು ಸರ್ವೆ ನಂ.69/1 ರ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ.1 ಮತ್ತು 2 ಎಂದು ಹಾಗೂ ಉಪನೋಂದಣಾಧಿಕಾರಿಗಳು ಜಗಳೂರು ಇವರು ನೀಡಿದ ಮಾರುಕಟ್ಟೆ ಮೌಲ್ಯ ದರ ಪಟ್ಟಿಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ.3 ಎಂದು ಗುರುತಿಸಲಾಯಿತು. ಈ ದಾಖಲೆಗಳನ್ನು ಪರಿಗಣಿಸಿ ನಾನು ಅರ್ಜಿಯಲ್ಲಿ ಕೋರಿಕೊಂಡ ಪರಿಹಾರವನ್ನು ನೀಡಬೇಕಾಗಿ ವಿನಂತಿಸಿಕೊಳ್ಳುತ್ತಿದ್ದೇನೆ.

ಪಾಟೀಸವಾಲುಃ - ಎದುರುದಾರರ ಪರ ವಕೀಲರಿಂದ ಃ

ನಮ್ಮ ಜಮೀನಿನಲ್ಲಿ 2014 ರಲ್ಲಿ ಲೈನ್ ಎಳೆಯಲಾಗಿದೆ ಎಂದರೆ ಸರಿ. ಆ ಸಮಯದಲ್ಲಿ ಕಂಪನಿಯವರು ನಮ್ಮ ಮನೆಗೆ ಬಂದು ನಮ್ಮಲ್ಲಿ ಮಾತಾಡಿ ನಮ್ಮ ಸಹಿ ಪಡೆದು ಲೈನ್ ಎಳೆದಿರುತ್ತಾರೆ ಎಂದರೆ ಸರಿ. ಆ ಸಮಯದಲ್ಲಿ ನಮಗೆ ಕಂಪನಿಯವರು 3 ಲಕ್ಷದ 80 ಸಾವಿರ ರೂಪಾಯಿ ಹಣ ನೀಡಿ ನನ್ನ ಜಮೀನಿನಲ್ಲಿ ಟವರ್ ಅನ್ನು ಹಾಕಿರುತ್ತಾರೆ. ಆ ಹಣವನ್ನು ಪಡೆದ ನಂತರ ನಾನು ಕಂಪನಿಯವರಿಗೆ ಲೈನ ಎಳೆಯಲು ಅನುಮತಿ ನೀಡಿದ್ದೇನೆ ಎಂದರೆ ಸರಿ. ನನ್ನ ಜಮೀನಿನಲ್ಲಿ ಒಂದು ಟವರ್ ಇರುತ್ತದೆ ಎಂದರೆ ಸರಿ. ಸದರಿ ಟವರ್ ಯಾವ ವರ್ಗಕ್ಕೆ ಬರುತ್ತದೆ ಎಂದು ನನಗೆ ತಿಳಿದಿಲ್ಲ ಎಂದರೆ ಸರಿ. ನನ್ನ ಜಮೀನಿನಲ್ಲಿ 6 ಮೀಟರ್ ಅಗಲದ ವಿಸ್ತೀರ್ಣದ ಲೈನನ್ನು ಎಳೆಯಲಾಗಿದೆ ಎಂದರೆ ಸರಿ. ನಮ್ಮ ಜಮೀನಿನಲ್ಲಿ ಸುಮಾರು 10 ಗುಂಟೆ ವಿಸ್ತೀರ್ಣದ ಲೈನ್ ಎಳೆದಿದ್ದಾರೆ ಎಂದರೆ ಸಾಕ್ಷಿಯು ನನಗೆ ಸರಿಯಾಗಿ ತಿಳಿದಿಲ್ಲ ಎಂದು ನುಡಿದಿರುತ್ತಾರೆ. ಕಂಪನಿಯವರು ನಮ್ಮ ಜಮೀನಿನಲ್ಲಿ ಲೈನ್ ಎಳೆಯುವ ಸಮಯದಲ್ಲಿ ಆಗಿನ ಮೌಲ್ಯಕ್ಕೆ ಸರಿಯಾಗಿ ಹಣವನ್ನು ನೀಡಿ ನಮ್ಮ ಒಪ್ಪಿಗೆಯನ್ನು ಪಡೆದುಕೊಂಡು ನಂತರ ಲೈನನ್ನು ಎಳೆದಿರುತ್ತಾರೆ ಎಂದರೆ ಸಾಕ್ಷಿಯು ಲೈನು ಎಳೆದಾದ ಬಳಿಕ ಮತ್ತಷ್ಟು ಪರಿಹಾರ ನೀಡುವುದಾಗಿ ಕಂಪನಿಯವರು ನನಗೆ ಹೇಳಿದ್ದು, ಆದರೆ ಹಣ ನೀಡದೆ ಇರುವ ಕಾರಣ ನಾನು ಈ ಅರ್ಜಿಯನ್ನು ದಾಖಲಿಸಿರುತ್ತೇನೆ. ನಾನು ನನ್ನ ಅರ್ಜಿಯಲ್ಲಿ ಹಾಗೂ ನನ್ನ ಪ್ರಮಾಣ ಪತ್ರದಲ್ಲಿ ನಾನು

ಕಂಪನಿಯಿಂದ ಹಣ ಪಡೆದುಕೊಂಡ ವಿಚಾರವಾಗಲಿ ಹಾಗೂ ಕಂಪನಿಯವರು ಹೆಚ್ಚಿನ ಹಣ ನೀಡುತ್ತೇವೆ ಎಂದು ಹೇಳಿದ ವಿಚಾರವಾಗಲಿ ಬರೆದಿರುವುದಿಲ್ಲ ಎಂದರೆ ಸರಿ. ನಾನು 2018 ರಲ್ಲಿ ಪ್ರಕರಣ ದಾಖಲಿಸಿರುತ್ತೇನೆ ಎಂದರೆ ಸರಿ.

ಮರುವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿಯಾಗಿದೆ

2ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು
ದಾವಣಗೆರೆ.